ಪ್ರಾಧಿಕಾರದಿಂದ ಟೆಂಡರ್‌ಗೆ ಅನುಮೋದನೆ ಪಡೆದು ಗುತ್ತಿಗೆ ವಹಿಸ ಲಾಗುವುದು.

ಇನ್ನುಳಿದ ಪ್ಯಾಕೇಜುಗಳು ಸರ್ಕಾರದ ಪರಿಶೀಲನೆಯಲ್ಲಿದೆ.

ಮುದ್ದೇಬಿಹಾಳ ತಂಗಡಗಿ ರಸ್ತೆ ದುರಸ್ತಿ

534 (560) ಶ್ರೀ ಅಪ್ಪಾಜಿ.ಸಿ.ಎಸ್.ನಾಡಗೌಡ (ಮುದ್ದೇಬಿಹಾಳ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುದ್ದೇಬಿಹಾಳ–ತಂಗಡಗಿ ರಸ್ತೆಯನ್ನು ಕಳೆದ ಮೂರು ವರ್ಷಗಳ ಅವಧಿಯಲ್ಲಿ ಎಷ್ಟು ಬಾರಿ ದುರಸ್ತಿ ಮಾಡಲಾಗಿದೆ;

ಆ) ಈ ರಸ್ತೆ ತುಂಬಾ ಹಾಳಾಗಿದ್ದು ಸಂಚಾರಕ್ಕೆ ಯೋಗ್ಯ ಸ್ಥಿತಿಯಲ್ಲಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕಳೆದ ವರ್ಷ ಸದರಿ ರಸ್ತೆಯನ್ನು ದುರಸ್ತಿ ಮಾಡುವ ಆಶ್ವಾಸನೆ ಕೊಟ್ಟಿದ್ದು, ಇನ್ನೂ ಕೆಲಸ ಪ್ರಾರಂಭವಾಗದಿರಲು ವಿಳಂಬಕ್ಕೆ ಕಾರಣಗಳೇನು;

ಈ) ಈ ರಸ್ತೆಯನ್ನು ಯಾವಾಗ ಪೂರ್ಣ ದುರಸ್ತಿ ಮಾಡಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಮುದ್ದೇಬಿಹಾಳ–ತಂಗಡಗಿ ರಸ್ತೆಯನ್ನು ಕಳೆದ ಮೂರು ವರ್ಷಗಳಲ್ಲಿ ಎರಡು ಬಾರಿ ದುರಸ್ತಿ ಮಾಡಲಾಗಿದೆ.

ಆ) ಗಮನಕ್ಕೆ ಬಂದಿದೆ.

ಇ) ಕಳೆದ ಸಾಲಿನಲ್ಲಿ ಗುಂಡಿ ಮುಚ್ಚುವ ಕಾಮಗಾರಿಯನ್ನು ಕೈಗೆತ್ತಿಕೊಂಡು ಜುಲೈ 2012 ರಲ್ಲಿ ಪೂರ್ಣಗೊಳಿಸಿ, ಸಂಚಾರಕ್ಕೆ ಯೋಗ್ಯ ಸ್ಥಿತಿಗೆ ತರಲಾಗಿರುತ್ತದೆ.

ಈ) ಸದರಿ ರಸ್ತೆಯನ್ನು ಎಸ್.ಹೆಚ್.ಡಿ.ಪಿ ರಡಿ ತೆಗೆದುಕೊಳ್ಳುತ್ತಿರು ವುದಾಗಿ ತಿಳಿದು ಬಂದಿದೆ.

ಮುಳುಗಡೆಯಾಗಿ ಪುನರ್ ವಸತಿಯಾಗದ ಗ್ರಾಮಗಳು

569 (194) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣಾ ನದಿಯ 519.6 ಮೀಟರ್ ಹಿನ್ನೀರಿನಿಂದ ಮುಳುಗಡೆಯಾಗಿ ಪುನರ್ ವಸತಿ ಸಮಸ್ಯೆ ಇರುವ ಜಮಖಂಡಿ ಕ್ಷೇತ್ರದ ಗ್ರಾಮಗಳಾವುವು;

ಆ) ಕಂಕಣವಾಡಿ, ಬೆನಗುಂಡಿ ಹಾಗೂ ರಹಿಮತಪೂರ ನಿವಾಸಿಗಳ ಪುನರ್ ವಸತಿಯ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

ಇ) ಸಮಸ್ಯೆ ಪರಿಹರಿಸಲು ಸಮಯ ನಿಗದಿಗೊಳಿಸಲಾಗಿದೆಯೇ?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) 519.00 ಮೀ. ಹಿನ್ನೀರಿನಿಂದ ಜಮಖಂಡಿ ಮತಕ್ಷೇತ್ರದಲ್ಲಿ ಒಟ್ಟು 21 ಗ್ರಾಮಗಳು ಮುಳುಗಡೆ ಆಗುತ್ತಿದ್ದು, ಇವುಗಳಿಗೆ 21 ಪುನರ್ವಸತಿ ಕೇಂದ್ರಗಳನ್ನು ನಿರ್ಮಿಸಲಾಗಿರುತ್ತದೆ, ಈ ಕೇಂದ್ರಗಳಲ್ಲಿ ಪುನರ್ವಸತಿಗೆ ಸಂಬಂಧಿಸಿದಂತೆ ಸಮಸ್ಯೆಗಳು ಇರುವುದಿಲ್ಲ.

ಆ)

1. ಕಂಕಣವಾಡಿ ಪುನರ್ವಸತಿ ಕೇಂದ್ರಕ್ಕೆ 113 ಎಕರೆ 33 ಗುಂಟೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇದರಲ್ಲಿ 1532 ನಿವೇಶನಗಳನ್ನು ಗುರುತಿಸಲಾಗಿದೆ. ಅರ್ಹ 179 ಫಲಾನುಭವಿಗಳಿಗೆ 'ಎ' ಮಾದರಿಯ ನಿವೇಶನಗಳನ್ನು ನೀಡಲಾಗಿದೆ ಹಾಗೂ ಮೂಲಭೂತ ಸೌಲಭ್ಯಗಳಲ್ಲಿ ರಸ್ತೆಯನ್ನು ನಿರ್ಮಿಸಲಾಗಿದೆ.
2. ಬೆನಗುಂಡಿ ಪುನರ್ವಸತಿ ಕೇಂದ್ರಕ್ಕೆ 86 ಎಕರೆ 13 ಗುಂಟೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇದರಲ್ಲಿ ಒಟ್ಟು 423 ವಿವಿಧ ಮಾದರಿಯ ನಿವೇಶನಗಳನ್ನು ಗುರುತಿಸಲಾಗಿದೆ. ಇದರಲ್ಲಿ ಅರ್ಹ ಫಲಾನುಭವಿಗಳಿಗೆ 379 ನಿವೇಶನ ಹಂಚಿಕೆ ಮಾಡಲಾಗಿದೆ. ಮೂಲಭೂತ ಸೌಲಭ್ಯಗಳಾದ ಸಮುದಾಯ ಭವನ, ಎ.ಎನ್.ಎಮ್.ಸಬ್ ಸೆಂಟರ್, ಪಶು ಚಿಕಿತ್ಸಾಲಯ, ಪ್ರಾಥಮಿಕ ಶಾಲೆ, ಅಂಗನವಾಡಿ ಕೇಂದ್ರ, ಸಿ.ಜಿ.ಪಿ.ಓ. ಶಿಕ್ಷಕರ ವಸತಿ ಗೃಹಗಳು, ರಸ್ತೆ, ಆಂತರಿಕ ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆ.

3. ರಹಿಮತಪೂರ ಹಾಗೂ ಬಿದರಿ ಪುನರ್ವಸತಿ ಕೇಂದ್ರಕ್ಕೆ ಸೇರಿ 197 ಎಕರೆ 04 ಗುಂಟೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇದರಲ್ಲಿ "ಎ" (10x10) ಮಾದರಿಯ ಒಟ್ಟು 3614 ನಿವೇಶನಗಳನ್ನು ಗುರುತಿಸಲಾಗಿದ್ದು, ಇದರಲ್ಲಿ 614 ನಿವೇಶನಗಳನ್ನು ರಹಿಮತಪೂರ ನಿವಾಸಿಗಳಿಗೆ ಕಾಯ್ದಿರಿಸಲಾಗಿದ್ದು, ಇದರಲ್ಲಿ ಅರ್ಹ ಫಲಾನುಭವಿಗಳಿಗೆ 71 ನಿವೇಶನ ಹಂಚಿಕೆ ಮಾಡಲಾಗಿದೆ. ಮೂಲಭೂತ ಸೌಲಭ್ಯಗಳಾದ ಪ್ರಾಥಮಿಕ ಶಾಲೆ, ಎತ್ತರಮಟ್ಟದ ಜಲಾಗಾರ, ಸಮುದಾಯ ಭವನ, ಎ.ಎನ್.ಎಮ್. ಸಬ್ ಸೆಂಟರ್, ಪಶು ಚಿಕಿತ್ಸಾಲಯ, ಅಂಗನವಾಡಿ ಕೇಂದ್ರ, ಸಿ.ಜಿ.ಪಿ.ಓ, ಶಿಕ್ಷಕರ ವಸತಿ ಗೃಹಗಳು, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ದೀಪದ ವ್ಯವಸ್ಥೆ, ರಸ್ತೆ, ಆಂತರಿಕ ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಪುನರ್ವಸತಿ ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳು

584 (789) ಶ್ರೀ ಪಾಟೀಲ್ ಎಂ.ಬಿ. (ಬಬಲೇಶ್ವರ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಅಡಿ ಮುಳುಗಡೆಯಾದ ಗ್ರಾಮಗಳ ಪುನರ್ವಸತಿ ಕೇಂದ್ರಗಳು ಯಾವುದು;

ಆ) ಸದರಿ ಪುನರ್ವಸತಿ ಕೇಂದ್ರಗಳಲ್ಲಿ ಎಷ್ಟಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ;

ಇ) ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕಾದ ಉಳಿದ ಪುನರ್ವಸತಿ ಕೇಂದ್ರಗಳು ಯಾವುವು;

ಈ) ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?